1.30 ಪಿಎಂ

(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಸಿ.ಆರ್.ಸಗೀರ್ ಆಹಮದ್(ಮಾನ್ಯ ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೇ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ 12ನೇ ಪಟ್ಟಿಯಲ್ಲಿರುವ 127 ಪ್ರಶ್ನೆಗಳ ಪೈಕಿ 105 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಶ್ರೀ ಸಿದ್ದರಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಮಾಡುವುದು.

1467(1941)

ಶ್ರೀ ಚನ್ನಿಗಪ್ಪ .ಸಿ.(ಕೊರಟಗೆರೆ): ಮಾನ್ಯ ಶ್ರೀ ಆರ್.ರೋಷನ್ ಬೇಗ್, ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಖ್ಯಾತ ಶ್ರೀ ಸಿದ್ಧರಬೆಟ್ಟವು ಪ್ರವಾಸಿ ತಾಣವಾಗಿದ್ದು, ಇಲ್ಲಿಗೆ ಗಿಡಮೂಲಿಕ ಔಷಧಿ ಹಾಗೂ ದೇವರ ದರ್ಶನಕ್ಕಾಗಿ ಸಾವಿರಾರು ಪ್ರವಾಸಿಗರು ಆಗಮಿಸುತ್ತಿದ್ದು ಹಿಂದಿನ ಅಧಿವೇಶನದಲ್ಲಿ ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರದ ಗಮನ ಸೆಳೆದಿದ್ದರೂ ಕ್ರಮ ಜರುಗಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ?

ಆ) ಹಾಗಿದ್ದಲ್ಲಿ ಶ್ರೀ ಸಿದ್ದರಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಇ) ಪ್ರವಾಸಿಗಳ ಹಿತದೃಷ್ಟಿಯಿಂದ ಶ್ರೀ ಸಿದ್ದರಬೆಟ್ಟವನ್ನು ಪ್ರವಾಸಿ ಕೇಂದ್ರವನ್ನಾಗಿ ಎಂದಿನಿಂದ ಮಾಡಲಾಗುವುದು?

ಶ್ರೀ ಆರ್.ರೋಷನ್ ಬೇಗ್(ಪ್ರವಾಸೋದ್ಯಮ ಮತ್ತು ಹಜ್ ಸಚಿವರು):

ಅ) ಹೌದು

ಆ) ಪ್ರಸಿದ್ಧ ಪ್ರವಾಸಿ ತಾಣವಾದ ಸಿದ್ದರಬೆಟ್ಟಕ್ಕೆ ಭೇಟಿ ನೀಡುವ ಪ್ರವಾಸಿಗರಿಗೆ ಅನುಕೂಲ ಕಲ್ಪಿಸಲು ಯಾತ್ರಿ ನಿವಾಸ ಹಾಗೂ ಶೌಚಾಲಯಗಳನ್ನು ಕೇಂದ್ರ ಧನ ಸಹಾಯದಡಿ ನಿರ್ಮಿಸಲಿದ್ದು, ಇದಕ್ಕಾಗಿ 2001-2002ನೇ ಸಾಲಿನ ಆದ್ಯತಾ ಪಟ್ಟಿಯಲ್ಲಿ ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಕೊರಟಗೆರೆ ತಾಲ್ಲೂಕಿನಲ್ಲಿ ಪಶು ಚಿಕಿತ್ಸಾಲಯ ಹಾಗೂ ಆಸ್ಪತ್ರೆಯ ದುರಸ್ತಿ.

1469(1939)

ಶ್ರೀ ಚನ್ನಿಗಪ್ಪ .ಸಿ (ಕೊರಟಗೆರೆ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು?

2) ಈ ಪ್ರಾಥಮಿಕ ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಯ ಕಟ್ಟಡಗಳು ದುಸ್ಥಿತಿಯಲ್ಲಿದ್ದು, ಇವುಗಳ ದುರಸ್ತಿಗೆ ಸರ್ಕಾರವು ಕ್ರಮ ಕೈಗೊಳ್ಳುವುದೇ?

3) ಈ ಪಶು ಚಿಕಿತ್ಸಾಲಯ ಹಾಗೂ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಸಕಾಲದಲ್ಲಿ ಚಿಕಿತ್ಸೆ ದೊರೆಯದೇ ಜಾನುವಾರುಗಳು ಮರಣ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

4) ಹಾಗಿದ್ದಲ್ಲಿ ಚಿಕಿತ್ಸಾಲಯದ ಹಾಗೂ ಪಶು ಆಸ್ಪತ್ರೆಗಳ ಕಟ್ಟಡಗಳನ್ನು ದುರಸ್ತಿಗೊಳಿಸಿ ಸಿಬ್ಬಂದಿಯ ಕೊರತೆ ಇರುವ ಆಸ್ಪತ್ರೆಗಳಿಗೆ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿ ಜಾನುವಾರುಗಳ ಚಿಕಿತ್ಸೆಗೆ ಅನುಕೂಲ ಎಂದಿನಿಂದ ಮಾಡಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

1) ಪಶು ಆಸ್ಪತ್ರೆ - 2; ಕೊರಟಗೆರೆ, ಹೊಳವನಹಳ್ಳಿ

ಪಶು ಚಿಕಿತ್ಸಾಲಯ - 2; ಕೊಳಾಲ, ತೋವಿನಕೆರೆ

ಪ್ರಾಥಮಿಕ ಪಶು ಚಿಕಿತ್ಸಾಲಯ - 12

1) ಬಿ.ಡಿ.ಪುರ 2) ವಡ್ಡಗೆರೆ 3) ದೊಡ್ಡಸಾಗ್ಗೆರೆ 4) ದಾಸರಹಳ್ಳಿ

5) ಅರಸಾಪುರ 6) ಅಕ್ಕಿರಾಂಪುರ 7) ತೀತ 8) ವಜ್ಜನ ಕುರ್ಕೆ

9) ಮಲ್ಲೇಕಾವು 10) ಎಳಚಗೆರೆ 11) ಇರಕಸಂದ್ರ ಕಾಲೋನಿ